## ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಸಿ. ಎನ್. ಮಂಜೇಗೌಡ ಇವರು ನಿಯಮ-330 ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:- ಮಂಡ್ಯ ಜಿಲ್ಲೆ, ಪಾಂಡವಪುರ ತಾಲ್ಲೂಕು, ಮೇಲುಕೋಟೆ ಹೋಬಳಿ ಕಾಡೇನಹಳ್ಳಿ ಗ್ರಾಮ ಹಾಗೂ ಕದಲಗೆರೆ ಗ್ರಾಮಗಳಲ್ಲಿ ಸುಮಾರು ಆರು ತಿಂಗಳುಗಳಿಂದ 10 ನಾಯಿಗಳ ಗುಂಪು ಸೇರಿ ಸುಮಾರು 150ಕ್ಕೂ ಹೆಚ್ಚು ಕುರಿ ಮೇಕೆ ತಿಂದಿದ್ದು, ಹಲವು ಬಾರಿ ದೂರು ದಾಖಲಿಸಿದ್ದರು ಸಹ ಇದುವರೆವಿಗೂ ಅರಣ್ಯ ಇಲಾಖೆಯವರು ಕ್ರಮಕೈಗೊಳ್ಳದೆ ಇರುವುದರಿಂದ ರೈತರಿಗೆ ತುಂಬಾ ಕಷ್ಟಕರವಾಗಿದ್ದು, ಅರಣ್ಯ ಇಲಾಖೆಯವರು ತಕ್ಷಣವೇ ಆ ನಾಯಿಗಳನ್ನು ಹಿಡಿದು ಅನ್ಯಾಯವಾಗಿರುವ ರೈತರಿಗೆ ಸರ್ಕಾರದಿಂದ ವತಿಯಿಂದ ಪರಿಹಾರವನ್ನು ವಿತರಿಸುವ ಬಗ್ಗೆ.**

**ಉತ್ತರ:-** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 58(xiii) ರಲ್ಲಿ ಬೀದಿ ನಾಯಿಗಳ ಸಂತಾನ ನಿಯಂತ್ರಣ ಹಾಗೂ ಹುಚ್ಚು ಪೀಡಿತ ರೋಗಗಳಿಂದ ನರಳುತ್ತಿರುವ ನಾಯಿಗಳಿಗೆ ಸೂಕ್ತ ಚಿಕಿತ್ಸೆಗಳನ್ನು ನೀಡುವುದು ಗ್ರಾಮ ಪಂಚಾಯಿತಿಗಳ ಪ್ರಕಾರ್ಯ ಮತ್ತು ಜವಾಬ್ದಾರಿಗಳ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಗ್ರಾಮೀಣ ಪ್ರದೇಶಗಳಲ್ಲಿನ ಬೀದಿ ಬದಿಯ ಮಾಂಸದ ವ್ಯಾಪಾರದ ಅಂಗಡಿಗಳು ಮತ್ತು ಹೋಟೆಲ್‌ಗಳ ಕುರಿ, ಕೋಳಿ ಮಾಂಸಗಳ ತ್ಯಾಜ್ಯದಿಂದ ಆ ಪ್ರದೇಶಗಳಲ್ಲಿ ಬೀದಿ ನಾಯಿಗಳ ಸಂಖ್ಯೆ ಹೆಚ್ಚಾಗಿರುತ್ತವೆ. ಈ ನಾಯಿಗಳು ನಾಗರೀಕರು ಮತ್ತು ಮಕ್ಕಳ ಮೇಲೆ ಆಕ್ರಮಣಕಾರಿ ದಾಳಿ ನಡೆಸಿ, ಗಾಯಗೊಳಿಸುತ್ತಿರುವುದು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 30 ಗ್ರಾಪಂನ್ಯಾ 2021, ದಿನಾಂಕ:12.04.2023 ರಲ್ಲಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಇರುವ ಬೀದಿ ನಾಯಿಗಳ ರಕ್ಷಣೆ, ಸಂತಾನ ನಿಯಂತ್ರಣ ಹಾಗೂ ರೋಗಗ್ರಸ್ಥ ನಾಯಿಗಳ ಚಿಕಿತ್ಸೆ ಮತ್ತು ಆರೈಕೆ ಮುಂತಾದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರದ ಪರಿಷ್ಕೃತ ನಿಯಮಗಳನ್ವಯ ತಾಲ್ಲೂಕು ಮಟ್ಟದ ಕಾರ್ಯಾಚರಣೆ ಹಾಗೂ ಮೇಲುಸ್ತುವಾರಿ ಸಮಿತಿಯನ್ನು ಈ ಕೆಳಕಂಡಂತೆ ರಚಿಸಿ, ಸಮಿತಿಯ ಕಾರ್ಯಗಳು ಹಾಗೂ ಕಾರ್ಯಕ್ರಮದ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಮಾರ್ಗಸೂಚಿಗಳ ಬಗ್ಗೆ ತಿಳಿಸಲಾಗಿದೆ.

### ತಾಲ್ಲೂಕು ಮಟ್ಟದ ಕಾರ್ಯಾಚರಣೆ ಹಾಗೂ ಮೇಲುಸ್ತುವಾರಿ ಸಮಿತಿ

| ಕ್ರ.ಸಂ | **ಸದಸ್ಯರುಗಳು** | **ಪದಾಧಿಕಾರಿಗಳು** |
|---|---|---|
| 1 | ಸಂಬಂಧಪಟ್ಟ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿ | ಅಧ್ಯಕ್ಷರು |
| 2 | ಸಂಬಂಧಪಟ್ಟ ತಾಲ್ಲೂಕು ಪಂಚಾಯಿತಿ ವ್ಯಾಪ್ತಿಯ ಆರೋಗ್ಯ ಅಧಿಕಾರಿ | ಸದಸ್ಯರು |
| 3 | ಸಂಬಂಧಪಟ್ಟ ತಾಲ್ಲೂಕು ಪಂಚಾಯಿತಿ ವ್ಯಾಪ್ತಿಯ ಪಶು ವೈದ್ಯಾಧಿಕಾರಿ | ಸದಸ್ಯರು |
| 4 | ಸಂಬಂಧಪಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸಂಬಂಧಿಸಿದ ಪಂಚಾಯತಿಯ ಪಶು ವೈದ್ಯರು. | ಸದಸ್ಯರು |
| 5 | ಸಂಬಂಧಪಟ್ಟ ಜಿಲ್ಲೆ ಮತ್ತು ತಾಲ್ಲೂಕು ಪಂಚಾಯಿತಿಯ ಪ್ರಾಣಿ ದಯಾ ಸಂಘದ ಪ್ರತಿನಿಧಿ | ಸದಸ್ಯರು |
| 6 | ಸಂಬಂಧಪಟ್ಟ ತಾಲ್ಲೂಕು ಪಂಚಾಯಿತಿಯ ಸಹಾಯಕ ನಿರ್ದೇಶಕರು(ಪಂಚಾಯತ್ ರಾಜ್) / (ಗ್ರಾಮೀಣ ಉದ್ಯೋಗ) | ಸದಸ್ಯ ಕಾರ್ಯದರ್ಶಿ |

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ದಾಳಿಯನ್ನು ತಡೆಗಟ್ಟಲು ಈ ಕೆಳಕಂಡಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

- ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ತ್ಯಾಜ್ಯ ನಿರ್ವಹಣೆಯನ್ನು ವ್ಯವಸ್ಥಿತವಾಗಿ ಹಾಗೂ ವೈಜ್ಞಾನಿಕವಾಗಿ ನಿರ್ವಹಿಸಿ ವಿಲೇವಾರಿ ಮಾಡುವುದು.
- ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮಾಂಸ ಮಾರಾಟ ಮಾಡುವ ಅಂಗಡಿಗಳಿಂದ ಮಾಂಸ ತ್ಯಾಜ್ಯವನ್ನು ಬೀದಿಗಳಲ್ಲಿ ಬಿಸಾಡದಂತೆ ಅರಿವು ಮೂಡಿಸುವುದು. ತದನಂತರ ಮುಂದುವರೆಸಿದಲ್ಲಿ ಇಂತಹ ಮಾರಾಟಗಾರರ ವಿರುದ್ಧ ಕ್ರಮ ಕೈಗೊಂಡು ದಂಡ ವಿಧಿಸುವ ಬಗ್ಗೆ/ ಮಾರಾಟ ಪರವಾನಗಿ ರದ್ದುಪಡಿಸುವ ಹಾಗೂ ಪ್ರಕರಣಗಳನ್ನು ದಾಖಲಿಸುವ ಬಗ್ಗೆ ಗ್ರಾಮ ಪಂಚಾಯಿತಿಗಳಲ್ಲಿ ತೀರ್ಮಾನಿಸಿ ಕ್ರಮ ವಹಿಸುವುದು.
- ಸಾರ್ವಜನಿಕರಲ್ಲಿ ತ್ಯಾಜ್ಯ ವಿಲೇವಾರಿ ಹಾಗೂ ನಿರ್ವಹಣೆಯ ಕುರಿತು ಅರಿವು ಮೂಡಿಸುವುದು.
- ಗ್ರಾಮಗಳಲ್ಲಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳನ್ನು ಸ್ವಚ್ಛವಾಗಿಡುವ ಕುರಿತು ಅಭಿಯಾನ/ಜಾಗೃತಿ ಮೂಡಿಸುವುದು..
- ಸಾರ್ವಜನಿಕರಲ್ಲಿ ಬೀದಿ ನಾಯಿಗಳ ದಾಳಿಯಿಂದ ಉಂಟಾಗಬಹುದಾದ ಪರಿಣಾಮಗಳ ಕುರಿತು ಜಾಗೃತಿ ಮೂಡಿಸುವುದು.
- ಬೀದಿ ನಾಯಿಗಳ ಸಂತಾನ ನಿಯಂತ್ರಣ (ABC) ಕಾರ್ಯಕ್ರಮ ಅನುಷ್ಠಾನದ ಕುರಿತು ಸರ್ಕಾರದಿಂದ ಹೊರಡಿಸಲಾದ ಆದೇಶ/ಮಾರ್ಗಸೂಚಿಗಳನ್ವಯ ಕ್ರಮ ವಹಿಸುವುದು.
- ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ತ್ಯಾಜ್ಯ ನಿರ್ವಹಣೆ ಮತ್ತು ವಿಲೇವಾರಿ ಕ್ರಮ ಕೈಗೊಂಡ ಮುಂದಿನ ಆರು ತಿಂಗಳುಗಳ ಒಳಗಾಗಿ ತ್ಯಾಜ್ಯ ಮುಕ್ತ ಗ್ರಾಮವನ್ನಾಗಿ ಘೋಷಿಸುವುದು.
- ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕಂಡುಬರುತ್ತಿರುವ ಕಸದ ರಾಶಿಗಳನ್ನು ತೆರವುಗೊಳಿಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು.

ಮುಂದುವರೆದು, ಪಾಂಡವಪುರ ತಾಲ್ಲೂಕು, ಮೇಲುಕೋಟೆ ಹೋಬಳಿ, ಕಾಡೇನಹಳ್ಳಿ ಗ್ರಾಮ ಹಾಗೂ ಕದಲಗೆರೆ ಗ್ರಾಮಗಳಲ್ಲಿ ಸುಮಾರು ಆರು ತಿಂಗಳುಗಳಿಂದ 10 ನಾಯಿಗಳ ಗುಂಪು ಸೇರಿ ಸುಮಾರು 150ಕ್ಕೂ ಹೆಚ್ಚು ಕುರಿ ಮೇಕೆ ತಿಂದಿರುವ ಬಗ್ಗೆ ಜಕ್ಕನಹಳ್ಳಿ ಗ್ರಾಮ ಪಂಚಾಯಿತಿಗೆ ಬೀದಿ ನಾಯಿಗಳ ಹಾವಳಿಯನ್ನು ತಡೆಗಟ್ಟಲು ಮತ್ತು ಸ್ಥಳೀಯ ವಲಯ ಅರಣ್ಯಾಧಿಕಾರಿ, ಪಾಂಡವಪುರ ವಲಯ ಕಛೇರಿಯಲ್ಲಿ ದೂರು ಅರ್ಜಿ ಸ್ವೀಕೃತವಾಗಿರುವುದಿಲ್ಲ.

ಸಂಖ್ಯೆ:RDPR 329 GPA 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.